9/05/2022 11:35

ಕರ್ನಾಟಕ ಸರ್ಕಾರ

ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ: ಕಾಶಿಇ_54_ಸುತ್ತೋಲೆ_2021-22_ತವಿ

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ: 06.05.2022

ಇವರಿಗೆ:-

ಕಾಲೇಜು ಶಿಕ್ಷಣ ಇಲಾಖೆಯ,

1. ಎಲ್ಲಾ ಪ್ರಾದೇಶಿಕ ಕಛೇರಿಗಳ ಜಂಟಿ ನಿರ್ದೇಶಕರುಗಳಿಗೆ,
2. ಎಲ್ಲಾ ಸರ್ಕಾರಿ ಪ್ರಥಮ ದರ್ಜೆ/ ಕಾನೂನು ಕಾಲೇಜುಗಳ ಪ್ರಾಂಶುಪಾಲರುಗಳಿಗೆ.

ಮಾನ್ಯರೆ,

ವಿಷಯ: ಸರ್ಕಾರದ ಅಧಿಸೂಚನೆ / ಸುತ್ತೋಲೆಗಳನ್ನು ಪರಿಚಲಿಸುವ ಬಗ್ಗೆ.

** ** **

ಸರ್ಕಾರದಿಂದ ಜಾರಿಗೊಳಿಸಿರುವ/ಹೊರಡಿಸಲಾಗಿರುವ ಈ ಕೆಳಕಂಡ ಆದೇಶವನ್ನು ಈ ಪತ್ರದೊಂದಿಗೆ ಲಗತ್ತಿಸಲಾಗಿದ್ದು, ಇವುಗಳನ್ನು ತಮ್ಮ ವ್ಯಾಪ್ತಿಯಲ್ಲಿ ಬರುವ ಎಲ್ಲ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಬೋಧಕ/ಬೋಧಕೇತರ ಸಿಬ್ಬಂದಿಗಳ ಗಮನಕ್ಕೆ ತರಲು ಸೂಚಿಸಲಾಗಿದೆ.

| ಕ್ರ.ಸಂ | ಸರ್ಕಾರಿ ಆದೇಶ ಸಂಖ್ಯೆ ಮತ್ತು ದಿನಾಂಕ | ವಿಷಯ |
|---|---|---|
| 01 | ಸರ್ಕಾರದ ಪತ್ರ<br>ಸಂಖ್ಯೆ: ಸಿಆಸುಇ 08 ಸೇಇವಿ 2022<br>ದಿನಾಂಕ: 19.03.2022. | ನಿವೃತ್ತಿ ಹೊಂದಲಿರುವ ಸರ್ಕಾರಿ ನೌಕರರ ವಿರುದ್ಧ ಸಕಾಲದಲ್ಲಿ ಇಲಾಖಾ ವಿಚಾರಣೆ ಆರಂಭಿಸುವ ಬಗ್ಗೆ ಸೂಚನೆಗಳು |
| 02 | ಸರ್ಕಾರದ ಪತ್ರ<br>ಸಂಖ್ಯೆ: ಸಿಆಸುಇ 13 ಸೇವನೆ 2022<br>ದಿನಾಂಕ: 22.03.2022 | ಅಧಿಸೂಚನೆ<br>ಕರ್ನಾಟಕ ನಾಗರಿಕ ಸೇವಾ<br>(ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆ ನಿಯಮಗಳು 2012ಕ್ಕೆ ತಿದ್ದುಪಡಿ) |
| 03 | ಸರ್ಕಾರದ ಪತ್ರ<br>ಸಂಖ್ಯೆ: ಡಿಪಿಎಆರ್ 87 ಎಸ್ಎಲ್ 2020.<br>ದಿನಾಂಕ: 22.03.2022 | ಅಧಿಸೂಚನೆ<br>ರಾಜ್ಯ ಉಚ್ಚನಾಯ್ಯಾಲಯದ ,ಮಾಜಿ ನ್ಯಾಯಾಧೀಶರಾಗಿದ ಕೆ. ಎನ್. ಫಣೀಂದ್ರ ಅವರನ್ನು ಉಪಲೋಕಯುಕ್ತರಾಗಿ ನೇಮಿಸಿರುತ್ತಾರೆ. |

ತಮ್ಮ ವಿಶ್ವಾಸಿ,

ಅಡಕ: ಮೇಲಿನಂತೆ

06/05/2022

ಮುಖ್ಯ ಆಡಳಿತಾಧಿಕಾರಿಗಳು
ಕಾಲೇಜು ಶಿಕ್ಷಣ ಇಲಾಖೆ

ಇವರಿಗೆ ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ:-

1. ಕೇಂದ್ರ ಕಛೇರಿಯ ಎಲ್ಲಾ ವಿಭಾಗಗಳ ಮುಖ್ಯಸ್ಥರುಗಳಿಗೆ
2. ಮಾಹಿತಿ ಅಧಿಕಾರಿಗಳು, ಮಾಹಿತಿ & ತಂತ್ರಜ್ಞಾನ ವಿಭಾಗ, ಕಾಲೇಜು ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ಬೆಂಗಳೂರು-ವೆಬ್‌ಸೈಟ್‌ನಲ್ಲಿ ಪ್ರಕಟಿಸಲು
3. ಕಛೇರಿ ಪ್ರತಿ.

3897808
30/03/2022
29/03/22

**GOVERNMENT OF KARNATAKA**

No. DPAR 87 SLU 2020

Karnataka Government Secretariat
Vikasa Soudha,
Bangalore, dated:22.03.2022.

**NOTIFICATION**

WHEREAS Shri Basavaraj Bommai, Chief Minister of Karnataka has recommended that Justice K.N.Phaneendra, Former Judge, High Court of Karnataka, be appointed as an Upalokayukta of Karnataka.

WHEREAS this recommendation has been made after consulting the Chief Justice of the High Court of Karnataka, the Speaker, Karnataka Legislative Assembly, the Chairman, Karnataka Legislative Council and Leaders of Opposition in both the Houses of Karnataka Legislature and also in accordance with the judgment of the Hon'ble Supreme Court of India, in CIVIL APPEAL of 2012 [Arising out of SLP (Civil) Nos.15658-15660 of 2012 and 16512-16514 of 2012].

**ORDER**

Now, therefore, in exercise of the powers vested in me under section 3(1) of the Karnataka Lokayukta Act, 1984 (Karnataka Act No.4 of 1985), I, THAAWARCHAND GEHLOT, Governor of Karnataka, hereby appoint Justice K.N.Phaneendra, Former Judge, High Court of Karnataka, as the Upalokayukta of Karnataka State.

Sd/-
21.03.2022

(THAAWARCHAND GEHLOT)
GOVERNOR OF KARNATAKA.

By order and in the name of the
Governor of Karnataka,

(HEMALATHA.P)
Secretary to Government,
Department of Personnel and
Administrative Reforms.

To:

Compiler, e-Gazette, Karnataka, for publication in Extra-ordinary Gazette.

...2.

**Copy to:**

1. Hon'ble Justice Shri K.N.Phaneendra, No.H506, ETA Gardens, Magadi Road, Opposite to Angala Parameshwari Temple, Bangalore-560023.
2. The Accountant General, Karnataka, Bangalore.
3. The Chief Secretary to Government of Karnataka, Bangalore.
4. All the Additional Chief Secretaries to Government of Karnataka.
5. The Special Secretary to Governor of Karnataka..
6. The Principal Secretary to Chief Minister to Government of Karnataka.
7. The Secretary, Karnataka Legislative Assembly.
8. The Secretary, Karnataka Legislative Council.
9. All Principal Secretaries/Secretaries to Government.
10. The Resident Commissioner, Karnataka Bhavan, Kautilya Marg, Chanakya Puri, New Delhi-110 011.
11. All Heads of Departments.
12. All Regional Commissioners in the State.
13. The Secretary, Karnataka Public Service Commission, Bangalore.
14. The Registrar General, High Court of Karnataka, Bangalore.
15. The Registrar, Karnataka State Administrative Tribunal, Kandaya Bhavan, K.G.Road, Bangalore.
16. The Registrar, Karnataka Appellate Tribunal, M.S.Building, Bangalore.
17. The Registrar, Karnataka Lokayukta, M.S.Building, Bangalore.
18. All Deputy Commissioners of Districts & Chief Executive Officers of Zilla Panchayats.
19. The Director, Bangalore Doordarshan Kendra, J.C.Nagar, Bangalore.
20. Press Table.
21. Spare copy/Section Guard File.

* * *

3897095
30/03/2022

(ಸಿ.ಎ-ಡಿಒ1) 29/03/22

ತನಿಖೆ

**ಕರ್ನಾಟಕ ಸರ್ಕಾರ**

ಸಂಖ್ಯೆ: ಸಿಆಸುಇ 13 ಸೇವನೆ 2022

ಕರ್ನಾಟಕ ಸರ್ಕಾರ ಸಚಿವಾಲಯ,
ವಿಧಾನಸೌಧ,
ಬೆಂಗಳೂರು, ದಿನಾಂಕ: 22.03.2022.

**ಅಧಿಸೂಚನೆ**

ಕರ್ನಾಟಕ ರಾಜ್ಯ ನಾಗರಿಕ ಸೇವಾ ಅಧಿನಿಯಮ, 1978 (1990 ರ ಕರ್ನಾಟಕ ಅಧಿನಿಯಮ 14) 8ನೇ ಪ್ರಕರಣದೊಂದಿಗೆ ಓದಲಾದಂತೆ, 3ನೇ ಪ್ರಕರಣದ (1)ನೇ ಉಪ-ಪ್ರಕರಣದ ಮೂಲಕ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ, ಕರ್ನಾಟಕ ಸರ್ಕಾರವು ರಚಿಸಲು ಉದ್ದೇಶಿಸಿರುವಂಥ ಕರ್ನಾಟಕ ನಾಗರಿಕ ಸೇವಾ (ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆ) ನಿಯಮಗಳು 2012ಕ್ಕೆ ತಿದ್ದುಪಡಿ ಮಾಡುವ ಸಲುವಾಗಿ ಈ ಕೆಳಗಿನ ನಿಯಮಗಳ ಕರಡನ್ನು, ಸದರಿ ಅಧಿನಿಯಮದ 3ನೇ ಪ್ರಕರಣದ (2)ನೇ ಉಪ ಪ್ರಕರಣದ (ಎ) ಖಂಡದ ಮೂಲಕ ಅಗತ್ಯಪಡಿಸಲಾದಂತೆ ಇದರಿಂದ ಬಾಧಿತರಾಗುವ ಸಂಭವವಿರುವ ಎಲ್ಲಾ ವ್ಯಕ್ತಿಗಳ ಮಾಹಿತಿಗಾಗಿ, ಈ ಮೂಲಕ ಪ್ರಕಟಿಸಲಾಗಿದೆ ಮತ್ತು ಸದರಿ ಕರಡನ್ನು ಅಧಿಕೃತ ರಾಜ್ಯಪತ್ರದಲ್ಲಿ ಪ್ರಕಟಗೊಂಡ ದಿನಾಂಕದಿಂದ ಹದಿನೈದು ದಿನಗಳ ನಂತರ ಪರಿಗಣನೆಗೆ ತೆಗೆದುಕೊಳ್ಳಲಾಗುವುದೆಂದು ಈ ಮೂಲಕ ಸೂಚಿಸಲಾಗಿದೆ.

6/4/2021

ಸದರಿ ಕರಡಿಗೆ ಸಂಬಂಧಪಟ್ಟಂತೆ ಮೇಲೆ ಗೊತ್ತುಪಡಿಸಿದ ಅವಧಿ ಕೊನೆಗೊಳ್ಳುವ ಮುಂಚೆ ಯಾರೇ ವ್ಯಕ್ತಿಯಿಂದ ರಾಜ್ಯ ಸರ್ಕಾರವು ಸ್ವೀಕರಿಸಬಹುದಾದ ಯಾವುದೇ ಆಕ್ಷೇಪಣೆ ಅಥವಾ ಸಲಹೆಯನ್ನು ರಾಜ್ಯ ಸರ್ಕಾರವು ಪರಿಗಣಿಸುತ್ತದೆ. ಆಕ್ಷೇಪಣೆಗಳು ಅಥವಾ ಸಲಹೆಗಳನ್ನು ಸರ್ಕಾರದ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ವಿಧಾನಸೌಧ, ಬೆಂಗಳೂರು-560001 ಇವರಿಗೆ ಸಲ್ಲಿಸತಕ್ಕದ್ದು.

**<u>ಕರಡು ನಿಯಮಗಳು</u>**

**1. ಶೀರ್ಷಿಕೆ ಮತ್ತು ಪ್ರಾರಂಭ:-** (1) ಈ ನಿಯಮಗಳನ್ನು ಕರ್ನಾಟಕ ನಾಗರಿಕ ಸೇವಾ (ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆ) (ತಿದ್ದುಪಡಿ) ನಿಯಮಗಳು 2022 ಎಂದು ಕರೆಯತಕ್ಕದ್ದು.

(2) ಈ ನಿಯಮಗಳು ಅಧಿಕೃತ ರಾಜ್ಯ ಪತ್ರದಲ್ಲಿ ಅಂತಿಮವಾಗಿ ಪ್ರಕಟಗೊಂಡ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

...2.

**2. ನಿಯಮ 2ಕ್ಕೆ ತಿದ್ದುಪಡಿ:-** ಕರ್ನಾಟಕ ನಾಗರಿಕ ಸೇವಾ (ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆ) ನಿಯಮಗಳು 2012ರ (ಇದರಲ್ಲಿ ಇನ್ನು ಮುಂದೆ ಸದರಿ ನಿಯಮಗಳೆಂದು ಉಲ್ಲೇಖಿಸಲಾಗಿದೆ) ನಿಯಮ 2ರಲ್ಲಿ "ಈ ನಿಯಮಗಳ ಪ್ರಾರಂಭದ ದಿನಾಂಕದಿಂದ ಹತ್ತು ವರ್ಷಗಳ ಅವಧಿಯೊಳಗೆ " ಎಂಬ ಪದಗಳ ಬದಲಿಗೆ "ದಿನಾಂಕ: 31.12.2022ರೊಳಗೆ " ಎಂಬ ಪದ ಮತ್ತು ಅಂಕಿಗಳನ್ನು ಪ್ರತಿಸ್ಥಾಪಿಸತಕ್ಕದ್ದು.

**3. ನಿಯಮ 3ಕ್ಕೆ ತಿದ್ದುಪಡಿ :-** ಸದರಿ ನಿಯಮಗಳ ನಿಯಮ 3ರಲ್ಲಿ,-

(ಎ) ಉಪನಿಯಮ (1)ರಲ್ಲಿ "ಯಾವುದೇ ಸರ್ಕಾರಿ ನೌಕರನು, ಈ ನಿಯಮಗಳ ಪ್ರಾರಂಭದ ದಿನಾಂಕದಿಂದ ಹತ್ತು ವರ್ಷಗಳ ಅವಧಿಯೊಳಗೆ ಪರೀಕ್ಷೆಯಲ್ಲಿ ಉತ್ತೀರ್ಣನಾಗದೇ ಇದ್ದಲ್ಲಿ ಮುಂಬಡ್ತಿಗೆ ಅರ್ಹನಾಗತಕ್ಕದ್ದಲ್ಲ. ಯಾವುದೇ ಸರ್ಕಾರಿ ನೌಕರನು, ಈ ನಿಯಮಗಳ ಪ್ರಾರಂಭದ ದಿನಾಂಕದಿಂದ ಹನ್ನೊಂದು ವರ್ಷಗಳ ಅವಧಿಯೊಳಗೆ ಪರೀಕ್ಷೆಯಲ್ಲಿ ಉತ್ತೀರ್ಣನಾಗದೇ ಇದ್ದಲ್ಲಿ ವಾರ್ಷಿಕ ವೇತನ ಬಡ್ತಿ ಗಳಿಸಲು ಅರ್ಹನಾಗತಕ್ಕದ್ದಲ್ಲ" ಎಂಬ ಪದಗಳ ಬದಲಿಗೆ "ಯಾವುದೇ ಸರ್ಕಾರಿ ನೌಕರನು ದಿನಾಂಕ: 31.12.2022ರೊಳಗೆ ಪರೀಕ್ಷೆಯಲ್ಲಿ ಉತ್ತೀರ್ಣನಾಗದೇ ಇದ್ದಲ್ಲಿ ಮುಂಬಡ್ತಿ ಮತ್ತು ವಾರ್ಷಿಕ ವೇತನ ಬಡ್ತಿ ಗಳಿಸಲು ಅರ್ಹನಾಗತಕ್ಕದ್ದಲ್ಲ" ಎಂಬ ಪದ ಮತ್ತು ಅಂಕಿಗಳನ್ನು ಪ್ರತಿಸ್ಥಾಪಿಸತಕ್ಕದ್ದು.

(ಬಿ) ಉಪ ನಿಯಮ (2)ರಲ್ಲಿ "ಈ ನಿಯಮಗಳ ಪ್ರಾರಂಭದ ದಿನಾಂಕದಿಂದ ಹತ್ತು ವರ್ಷಗಳ ಅವಧಿಯೊಳಗೆ" ಎಂಬ ಪದಗಳ ಬದಲಿಗೆ "ದಿನಾಂಕ: 31.12.2022 ರೊಳಗೆ" ಎಂಬ ಪದ ಮತ್ತು ಅಂಕಿಗಳನ್ನು ಪ್ರತಿಸ್ಥಾಪಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

Thejavathi 22/3/2022

(ತೇಜಾವತಿ.ಎನ್)
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಸೇವಾ ನಿಯಮಗಳು-ವಿಶೇಷ ಕೋಶ).

ಪ್ರತಿ:

1. ಪ್ರಧಾನ ಮಹಾಲೇಖಪಾಲರು (ಜಿ&ಎಸ್‌ಎಸ್‌ಎ)/(ಇ&ಆರ್‌ಎಸ್-ಎ)/(ಎ&ಇ).
2. ಸರ್ಕಾರದ ಮುಖ್ಯ ಕಾರ್ಯದರ್ಶಿಯವರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು ಹಾಗೂ ಅಭಿವೃದ್ಧಿ ಆಯುಕ್ತರು.
5. ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಯವರು/ಕಾರ್ಯದರ್ಶಿಯವರು.
6. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು.
7. ರಾಜ್ಯಪಾಲರ ವಿಶೇಷ ಕಾರ್ಯದರ್ಶಿಯವರು.
8. ಎಲ್ಲಾ ಇಲಾಖಾ ಮುಖ್ಯಸ್ಥರು.
9. ಎಲ್ಲಾ ಪ್ರಾದೇಶಿಕ ಆಯುಕ್ತರು.
10. ಎಲ್ಲಾ ಜಿಲ್ಲಾಧಿಕಾರಿಗಳು/ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
11. *ಮಹಾ ನಿಬಂಧಕರು, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
12. *ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
13. *ನಿಬಂಧಕರು, ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿ, ಕಂದಾಯ ಭವನ, ಕೆ.ಜಿ.ರಸ್ತೆ, ಬೆಂಗಳೂರು.
14. *ನಿಬಂಧಕರು, ಕರ್ನಾಟಕ ಮೇಲ್ಮನವಿ ಪ್ರಾಧಿಕಾರ, ಬೆಂಗಳೂರು.
15. *ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು.
16. *ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ/ಪರಿಷತ್ತು, ಬೆಂಗಳೂರು.
17. ನಿವಾಸಿ ಆಯುಕ್ತರು, ಕರ್ನಾಟಕ ಭವನ, ಕೌಟಿಲ್ಯ ಮಾರ್ಗ, ಚಾಣಕ್ಯಪುರಿ, ನವದೆಹಲಿ-110021.
18. ಎಲ್ಲಾ ಸಚಿವರ/ರಾಜ್ಯ ಸಚಿವರ ಆಪ್ತ ಕಾರ್ಯದರ್ಶಿಗಳು.
19. ಸರ್ಕಾರದ ಎಲ್ಲಾ ವಿಶೇಷ/ಅಪರ/ಜಂಟಿ/ಉಪ/ಅಧೀನ ಕಾರ್ಯದರ್ಶಿಗಳು.
20. ಸಚಿವಾಲಯದ ಎಲ್ಲಾ ಶಾಖೆಗಳು
21. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಪಾರ್ಕ್, ಬೆಂಗಳೂರು.
22. ವಾರದ ರಾಜ್ಯಪತ್ರ.
23. ಶಾಖಾ ರಕ್ಷಾ ಕಡತ/ಬಿಡಿ ಪ್ರತಿಗಳು.

(*ಪ್ರತ್ಯೇಕ ಮುಖಪತ್ರದೊಂದಿಗೆ)

3897456
30/03/2022

**GOVERNMENT OF KARNATAKA**

No. DPAR 13 SCR 2022

Karnataka Government Secretariat,
Vidhana Soudha,
Bengaluru, dated: 22.03.2022.

## NOTIFICATION

The draft of the following rules further to amend the Karnataka Civil Services (Computer Literacy Test) Rules, 2012, which the Government of Karnataka proposes to make in the exercise of the powers conferred by sub-section (1) of Section 3 read with Section 8 of the Karnataka State Civil Services Act, 1978 (Karnataka Act 14 of 1990) is hereby published as required by clause (a) of sub-section (2) of Section 3 of the said Act, for the information of all persons likely to be affected thereby and notice is hereby given that the said draft will be taken into consideration after fifteen days from the date of its publication in the Official Gazette.

Any objection or suggestion, which may be received by the State Government from any person with respect to the said draft before the expiry of the period specified above will be considered by the State Government. Objections and suggestions may be addressed to the Secretary to Government, Department of Personnel and Administrative Reforms, Vidhana Soudha, Bengaluru-560 001.

## DRAFT RULES

1. **Title and Commencement:-** (1) These rules may be called the Karnataka Civil Services (Computer Literacy Test) (Amendment) Rules, 2022.

(2) They shall come into force from the date of their final publication in the Official Gazette.

2...

**2. Amendment of rule 2:-** In the Karnataka Civil Services (Computer Literacy Test) Rules, 2012 (hereinafter referred to as the said rules), in rule 2, for the words "within the period of ten years from the date of commencement of these rules " the word and figures "within 31.12.2022" shall be substituted.

**3. Amendment of rule 3.-** In rule 3 of the said rules,-

(a) in sub-rule (1) for the words "No Government Servant shall be eligible for promotion unless he passes the Test within a period of ten years from the date of commencement of these rules. No Government Servant shall be eligible for earning annual increment unless he passes the test within a period of eleven years from the date of commencement of these rules" the word and figures "No Government Servant shall be eligible for promotion and earning annual increment unless he passes the test within 31.12.2022" shall be substituted.

(b) in sub-rule (2), for the words "within a period of ten years from the date of commencement of these Rules" the word and figures "within 31.12.2022" shall be substituted.

By Order and in the name of the
Governor of Karnataka

Thejavathi 22/3/2022

(THEJAVATHI.N)
Under Secretary to Government
Department of Personnel and
Administrative Reforms
(Service Rules-Special Cell).

**Copy to:-**

1) The Accountant General (G & S S A)/(E & R S- A)/(A & E), Bengaluru.
2) The Chief Secretary to Government.
3) The Additional Chief Secretary to Government.
4) The Additional Chief Secretary to Government and Development Commissioner.
5) The Principal Secretary/Secretary to Chief Minister.
6) All Additional Chief Secretaries/Principal Secretaries/Secretaries to Government.
7) Special Secretary to Governor.
8) All Heads of Departments.
9) All Regional Commissioners.
10) All Deputy Commissioners/Chief Executive Officers of Zilla Panchayats.
11) *The Registrar General, High Court of Karnataka, Bengaluru.
12) *The Registrar, Karnataka Lokayukta, Bengaluru.
13)*The Registrar, Karnataka State Administrative Tribunal, Kandaya Bhavana, Bengaluru.
14) The Registrar, Karnataka Appellate Tribunal, Bengaluru.
15)* The Secretary, Karnataka Public Service Commission, Bengaluru.
16)*The Secretary, Karnataka Legislative Assembly/Council, Bengaluru.
17)*Resident Commissioner, Karnataka Bhavan, Kautilya Marg, Chanakyapuri, New Delhi-110011.
18) Private Secretary to all Ministers / State Ministers.
19) All Special/Additional/Joint/Deputy/Under Secretaries to Government.
20) All Sections of the Secretariat.
21) President, Karnataka Government Employees Association. Cubbon Park, Bengaluru.
22) Weekly Gazette.
23) Section Guard File/ Spare Copies.

(*With a covering letter)

3901263
30/03/2022

ಕರ್ನಾಟಕ ಸರ್ಕಾರ

ಒಳಂಆ/ ತ್ರ್ಯ 29/03/22

ಸಂಖ್ಯೆ: ಸಿಆಸುಇ 08 ಸೇಇವಿ 2022

ಕರ್ನಾಟಕ ಸರ್ಕಾರದ ಸಚಿವಾಲಯ
ವಿಧಾನಸೌಧ,
ಬೆಂಗಳೂರು, ದಿನಾಂಕ: 19.03.2022

## ಸುತ್ತೋಲೆ

ವಿಷಯ: ನಿವೃತ್ತಿ ಹೊಂದಲಿರುವ ಸರ್ಕಾರಿ ನೌಕರರ ವಿರುದ್ಧ ಸಕಾಲದಲ್ಲಿ ಇಲಾಖಾ ವಿಚಾರಣೆ ಆರಂಭಿಸುವ ಬಗ್ಗೆ ಸೂಚನೆಗಳು.

ಉಲ್ಲೇಖ:
1. ಅಧಿಕೃತ ಜ್ಞಾಪನ ಸಂಖ್ಯೆ: ಡಿಪಿಎಆರ್ 41 ಎಸ್‌ಡಿಇ 83, ದಿನಾಂಕ:16.08.1983
2. ಅಧಿಕೃತ ಜ್ಞಾಪನ ಸಂಖ್ಯೆ: ಡಿಪಿಎಆರ್ 33 ಎಸ್‌ಡಿಇ 83, ದಿನಾಂಕ:24.05.1984
3. ಸುತ್ತೋಲೆ ಸಂಖ್ಯೆ: ಸಿಆಸುಇ 7 ಸೇಇವಿ 96, ದಿನಾಂಕ:04.07.1996
4. ಸುತ್ತೋಲೆ ಸಂಖ್ಯೆ: ಸಿಆಸುಇ 04 ಸೇಇವಿ 96, ದಿನಾಂಕ:28.08.1996
5. ಸುತ್ತೋಲೆ ಸಂಖ್ಯೆ: ಸಿಆಸುಇ 09 ಸೇಇವಿ 98, ದಿನಾಂಕ:22.07.1998
6. ಸುತ್ತೋಲೆ ಸಂಖ್ಯೆ: ಸಿಆಸುಇ 47 ಸೇಇವಿ 2001, ದಿನಾಂಕ:23.03.2002
7. ಸುತ್ತೋಲೆ ಸಂಖ್ಯೆ: ಸಿಆಸುಇ 07 ಸೇಇವಿ 2003, ದಿನಾಂಕ:12.05.2003
8. ಸುತ್ತೋಲೆ ಸಂಖ್ಯೆ: ಸಿಆಸುಇ 1 ಸೇಇವಿ 2005, ದಿನಾಂಕ:09.02.2005.
9. ಸುತ್ತೋಲೆ ಸಂಖ್ಯೆ: ಸಿಆಸುಇ 76 ಸೇಇವಿ 2018 ದಿನಾಂಕ:21.01.2019

********

Received
5/4/2022

ನಿವೃತ್ತಿ ಹೊಂದಲಿರುವ ಸರ್ಕಾರಿ ನೌಕರರ ವಿರುದ್ಧ ಅವರು ಸೇವೆಯಲ್ಲಿರುವಾಗ ಎಸಗಿದ ದುರ್ನಡತೆಗಾಗಿ ಕ್ಲುಪ್ತ ಸಮಯದಲ್ಲಿ ಅಂದರೆ ಅಂತಹ ನೌಕರ ಸೇವೆಯಿಂದ ನಿವೃತ್ತಿ ಹೊಂದುವ ಸಾಕಷ್ಟು ಪೂರ್ವದಲ್ಲಿಯೇ ಶಿಸ್ತಿನ ಕ್ರಮ ಆರಂಭಿಸುವಂತೆ ಹಾಗೂ ಇತ್ಯರ್ಥಪಡಿಸುವಂತೆ ಮೇಲೆ ಉಲ್ಲೇಖಿಸಿರುವ ಹಲವಾರು ಸುತ್ತೋಲೆ ಹಾಗೂ ಅಧಿಕೃತ ಜ್ಞಾಪನಗಳಲ್ಲಿ ಸರ್ಕಾರದಿಂದ ಕಾಲ ಕಾಲಕ್ಕೆ ಸೂಚನೆಗಳನ್ನು ನೀಡಲಾಗಿದೆ. ಸರ್ಕಾರಿ ನೌಕರನ ನಿವೃತ್ತಿ ನಂತರದ ಶಿಸ್ತು ಕ್ರಮಗಳನ್ನು ಕರ್ನಾಟಕ ನಾಗರಿಕ ಸೇವಾ (ವರ್ಗೀಕರಣ, ನಿಯಂತ್ರಣ ಹಾಗೂ ಮೇಲ್ಮನವಿ) ನಿಯಮಗಳು 1957 ರಡಿ ಕೈಗೊಳ್ಳಲು ಅವಕಾಶವಿರುವುದಿಲ್ಲ. ಅಂತಹ ಶಿಸ್ತಿನ ಕ್ರಮವನ್ನು ಕರ್ನಾಟಕ ನಾಗರಿಕ ಸೇವಾ ನಿಯಮಗಳ ನಿಯಮ 214 ರಡಿ ಮಾತ್ರ ಕೈಗೊಳ್ಳಲು ಅವಕಾಶವಿರುತ್ತದೆ. ಸರ್ಕಾರಿ ನೌಕರನು ನಿವೃತ್ತಿಯಾದ ನಂತರ ಅವನ ಮೇಲೆ ಹೂಡಲಾಗಿದ್ದ ಇಲಾಖಾ ವಿಚಾರಣೆಗಳನ್ನು ಸರ್ಕಾರಕ್ಕೆ ಆತನಿಂದ ಆರ್ಥಿಕ ಹಾನಿ ಉಂಟಾಗಿಲ್ಲವೆಂಬ ಕಾರಣದ ಮೇಲೆ ಹಿಂದಕ್ಕೆ ತೆಗೆದುಕೊಳ್ಳುವ ಪ್ರಸ್ತಾವನೆಗಳು ಸರ್ಕಾರಕ್ಕೆ ಬರುತ್ತಿವೆ. ಇದು ಸರಿಯಲ್ಲ. ಇದಲ್ಲದೇ ಸರ್ಕಾರಿ ನೌಕರ ನಿವೃತ್ತಿ ಹೊಂದುವ ಕೆಲವೇ ದಿನಗಳ ಮೊದಲು ಶಿಸ್ತು ಕ್ರಮದ ಪ್ರಸ್ತಾವನೆಗಳನ್ನು ಸಲ್ಲಿಸಲಾಗುತ್ತಿರುವುದನ್ನು ಕೂಡ ಗಮನಿಸಲಾಗಿದೆ.

ಸರ್ಕಾರಿ ನೌಕರನು ಸೇವೆಯಲ್ಲಿರುವಾಗಲೇ ಎಸಗಿದ ದುರ್ನಡತೆಗೆ ಸಂಬಂಧಿಸಿದಂತೆ ಆತ ನಿವೃತ್ತಿ ಹೊಂದುವವರೆಗೆ ಯಾವುದೇ ಕ್ರಮವಹಿಸದೆ ಅಥವಾ ನಿವೃತ್ತಿ ನಿಕಟಪೂರ್ವದಲ್ಲಿ ಅಂತಹ ಶಿಸ್ತಿನ ಕ್ರಮ ಆರಂಭಿಸುತ್ತಿರುವುದನ್ನು ಸರ್ಕಾರವು ಗಂಭೀರವಾಗಿ ಪರಿಗಣಿಸಿದೆ. ಇದರಿಂದ ಅಂತಹ ಸರ್ಕಾರಿ ನೌಕರನ ವಿರುದ್ಧ ಪರಿಣಾಮಕಾರಿಯಾಗಿ ಶಿಸ್ತು ಕ್ರಮ ಕೈಗೊಳ್ಳಲು ಆಸ್ಪದವಾಗದೆ ಅಂತಹ ತಪ್ಪಿತಸ್ಥ ನೌಕರನು ರಕ್ಷಿಸಲ್ಪಡುವನಲ್ಲದೆ ಇದು ಸರ್ಕಾರದ ಹಿತಾಸಕ್ತಿಗೆ ಕೂಡ ಮಾರಕವಾಗಿರುತ್ತದೆ. ಮುಂದುವರೆದು, ಕೆಲವು ಸಂದರ್ಭಗಳಲ್ಲಿ ದುರ್ನಡತೆಯು ಸರ್ಕಾರಿ ನೌಕರ ನಿವೃತ್ತಿ ಹೊಂದಿದ ನಾಲ್ಕು ವರ್ಷಕ್ಕೂ ಹಿಂದಿನ ಅವಧಿಗೆ ಸಂಬಂಧಿಸಿದೆ ಎಂಬ ಕಾರಣದ ಆಧಾರದ ಮೇಲೆ ಆತನ ವಿರುದ್ಧ ಕರ್ನಾಟಕ ನಾಗರಿಕ ಸೇವಾ ನಿಯಮಗಳ ನಿಯಮ 214 (ಬಿ)(ii)ರನ್ವಯ ಶಿಸ್ತಿನ ಕ್ರಮ ಕೈಗೊಳ್ಳಲು ಸಾಧ್ಯವಿಲ್ಲವೆಂಬ ಅನಿವಾರ್ಯ ನಿಲುವಿಗೆ ಬರಲಾಗುತ್ತಿದೆ.

....2

ಯಾವುದೇ ನಿವೃತ್ತ ಸರ್ಕಾರಿ ನೌಕರರ ವಿರುದ್ಧ ಶಿಸ್ತಿನ ಕ್ರಮ ಆರಂಭಿಸಲು ಸಂಬಂಧಪಟ್ಟ ಸಚಿವಾಲಯದ ಆಡಳಿತ ಇಲಾಖೆಗಳು ಕರ್ನಾಟಕ ನಾಗರಿಕ ಸೇವಾ ನಿಯಮಗಳ ನಿಯಮ 214 ರಡಿ ಕ್ರಮವಹಿಸಬೇಕಾಗಿರುವುದರಿಂದ ಅಂತಹ ಪ್ರಕರಣಗಳಲ್ಲಿ ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಉಲ್ಲೇಖ (9)ರ ಸರ್ಕಾರದ ಮುಖ್ಯ ಕಾರ್ಯದರ್ಶಿಯವರಿಂದ ಹೊರಡಿಸಲಾದ ದಿನಾಂಕ 21.01.2019ರ ಸುತ್ತೋಲೆಯಲ್ಲಿ ವಿವರವಾದ ಸೂಚನೆಗಳನ್ನು ನೀಡಲಾಗಿದೆ. ಅದರಲ್ಲಿ ನೀಡಲಾದ ಸೂಚನೆಗಳನ್ನು ಎಲ್ಲಾ ಶಿಸ್ತು ಪ್ರಾಧಿಕಾರಿಗಳ ಗಮನಕ್ಕೆ ತರುವಂತೆ ಈ ಮೂಲಕ ಮತ್ತೊಮ್ಮೆ ತಿಳಿಸಲಾಗಿದೆ. ಇಂತಹ ಪ್ರಕರಣಗಳಲ್ಲಿ ಶಿಸ್ತು ಕ್ರಮದ ಪ್ರಸ್ತಾವನೆಗಳನ್ನು ಸಂಬಂಧಿಸಿದ ಅಧಿಕಾರಿ ವಯೋನಿವೃತ್ತಿ ಹೊಂದುವ ಕನಿಷ್ಠ 30 ದಿನಗಳ ಮುಂಚೆಯೇ ಕರಡು ದೋಷಾರೋಪಣ ಪಟ್ಟಿ ಮತ್ತು ಇನ್ನಿತರೆ ಪೂರಕ ಕಾಗದ ಪತ್ರ ಮತ್ತು ದಾಖಲೆಗಳೊಡನೆ ಶಿಸ್ತು ಪ್ರಾಧಿಕಾರಿಗೆ ಸಲ್ಲಿಸುವಂತೆ ಮರುಸೂಚನೆಗಳನ್ನು ನೀಡಲಾಗಿದೆ. ಮುಂದುವರೆದು, ಯಾವುದೇ ಸರ್ಕಾರಿ ನೌಕರನು ಎಸಗಿದ ದುರ್ನಡತೆಯು ಶಿಸ್ತು ಪ್ರಾಧಿಕಾರಿಗಳ ಗಮನಕ್ಕೆ ಬಂದ ಸಂದರ್ಭದಲ್ಲಿ ಹಾಗೂ ಅಂತಹ ಸರ್ಕಾರಿ ನೌಕರ ನಿವೃತ್ತಿ ಅಂಚಿನಲ್ಲಿದ್ದಲ್ಲಿ ಸಂಬಂಧಪಟ್ಟ ಶಿಸ್ತು ಪ್ರಾಧಿಕಾರಿಗಳು ಯಾವುದೇ ಅನಗತ್ಯ ಹಾಗೂ ಉದ್ದೇಶಪೂರ್ವಕ ವಿಳಂಬಕ್ಕೆ ಆಸ್ಪದ ಕಲ್ಪಿಸದೇ ಅಂತಹ ನೌಕರರ ವಿರುದ್ಧ ಶಿಸ್ತು ಕ್ರಮ ಜರುಗಿಸತಕ್ಕದ್ದೆಂದು ಕೂಡ ತಿಳಿಸಲಾಗಿದೆ. ಕಾಲಮಿತಿ ಮೀರಿದ ಪ್ರಕರಣಗಳಲ್ಲಿ ವಿಳಂಬಕ್ಕೆ ಜವಾಬ್ದಾರರಾದ ನೌಕರರು/ಅಧಿಕಾರಿಗಳನ್ನು ಗುರುತಿಸಿ ಅವರುಗಳ ವಿರುದ್ಧ ಶಿಸ್ತಿನ ಕ್ರಮ ಜರುಗಿಸತಕ್ಕದ್ದು ಎಂದು ಕೂಡ ತಿಳಿಸಲಾಗಿದೆ.

Hemalatha P

(ಪಿ.ಹೇಮಲತ)
ಸರ್ಕಾರದ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
19/03/2022

ಇವರಿಗೆ:-

ಸಂಕಲನಕಾರರು, ಕರ್ನಾಟಕ e-ರಾಜ್ಯ ಪತ್ರ.

ಪ್ರತಿಯನ್ನು:-

1. ಸರ್ಕಾರದ ಮುಖ್ಯ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರು.
4. ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿ/ಕಾರ್ಯದರ್ಶಿ.
5. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳು.
6. ರಾಜ್ಯಪಾಲರ ವಿಶೇಷ ಕಾರ್ಯದರ್ಶಿ.
7. ನಿವಾಸಿ ಆಯುಕ್ತರು, ಕರ್ನಾಟಕ ಭವನ, ಕೌಟಿಲ್ಯ ಮಾರ್ಗ, ಚಾಣಕ್ಯಪುರಿ, ನವದೆಹಲಿ-110 011.
8. ಎಲ್ಲಾ ಇಲಾಖಾ ಮುಖ್ಯಸ್ಥರು
9. ಎಲ್ಲಾ ಪ್ರಾದೇಶಿಕ ಆಯುಕ್ತರು
10. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು/ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್
11. *ಕಾರ್ಯದರ್ಶಿ, ಕರ್ನಾಟಕ ವಿಧಾನಸಭೆ/ಪರಿಷತ್ತು, ಬೆಂಗಳೂರು
12. *ಮಹಾನಿಬಂಧಕರು, ಕರ್ನಾಟಕ ಉಚ್ಛ ನ್ಯಾಯಾಲಯ, ಬೆಂಗಳೂರು.
13. *ನಿಬಂಧಕರು, ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿ, ಕಂದಾಯ ಭವನ, ಕೆ.ಜಿ.ರಸ್ತೆ, ಬೆಂಗಳೂರು-9.
14. *ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬಹುಮಹಡಿ ಕಟ್ಟಡ, ಬೆಂಗಳೂರು.
15. *ನಿಬಂಧಕರು, ಕರ್ನಾಟಕ ಮೇಲ್ಮನವಿ ಪ್ರಾಧಿಕಾರ, ಬೆಂಗಳೂರು.
16. *ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗಸೌಧ, ಬೆಂಗಳೂರು
17. ರಕ್ಷಾ ಕಡತ/ಬಿಡಿ ಪ್ರತಿಗಳು.

(*ಪ್ರತ್ಯೇಕ ಪತ್ರದೊಂದಿಗೆ)